**All India Radio: Bangalore**
**National Bulletin In Kannada**
**29.12.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**29.12.2025 07.35 a.m.**

**<><><><>**

ಮುಖ್ಯಾಂಶಗಳು

1. ಭಾರತವನ್ನು ಜಾಗತಿಕ ಸೇವೆಗಳ ದೈತ್ಯವನ್ನಾಗಿ ಮಾಡಲು ರಾಜ್ಯಗಳಿಗೆ ಪ್ರಧಾನಿ ನರೇಂದ್ರ ಮೋದಿ ಕರೆ
2. ಶೀಘ್ರದಲ್ಲೇ ಮೊದಲ ವಂದೇ ಭಾರತ್ ಸ್ಲೀಪರ್ ರೈಲು ಹಳಿಗೆ
3. ರಷ್ಯಾ-ಉಕ್ರೇನ್ ಶಾಂತಿ ಪ್ರಸ್ತಾಪ: ಫ್ಲೋರಿಡಾದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಸಭೆ
4. ಮಹಿಳಾ ಟಿ-೨೦ ಕ್ರಿಕೆಟ್: ಸರಣಿಯ ನಾಲ್ಕನೇ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಭಾರತ ತಂಡಕ್ಕೆ ೩೦ ರನ್‌ಗಳ ಜಯ

<><><><>

ಉತ್ಪಾದನೆಯನ್ನು ಪ್ರೋತ್ಸಾಹಿಸಲು, ವ್ಯವಹಾರವನ್ನು ಮತ್ತಷ್ಟು ಸುಲಭಗೊಳಿಸಲು ಮತ್ತು ಭಾರತವನ್ನು ಜಾಗತಿಕ ಸೇವೆಗಳ ದೈತ್ಯವನ್ನಾಗಿ ಮಾಡಲು ಪ್ರಧಾನಿ ನರೇಂದ್ರ ಮೋದಿ, ರಾಜ್ಯಗಳಿಗೆ ಕರೆ ನೀಡಿದ್ದಾರೆ. ಶೀಘ್ರದಲ್ಲೇ ಭಾರತ, ರಾಷ್ಟ್ರೀಯ ಉತ್ಪಾದನಾ ಮಿಷನ್ ಪ್ರಾರಂಭಿಸಲಿದೆ ಮತ್ತು ಪ್ರತಿಯೊಂದು ರಾಜ್ಯ ಇದಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಮತ್ತು ಜಾಗತಿಕ ಕಂಪನಿಗಳನ್ನು ಆಕರ್ಷಿಸಲು ಮೂಲಸೌಕರ್ಯವನ್ನು ರಚಿಸಬೇಕು ಎಂದು ಅವರು ಹೇಳಿದರು. ನವದೆಹಲಿಯಲ್ಲಿ ನಿನ್ನೆ ಮುಕ್ತಾಯಗೊಂಡ ಐದನೇ ಮುಖ್ಯ ಕಾರ್ಯದರ್ಶಿಗಳ ರಾಷ್ಟ್ರೀಯ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಪ್ರಧಾನಿ, ದೇಶದ ಸುಮಾರು ಶೇಕಡಾ ೬೦ ರಷ್ಟು ಜನಸಂಖ್ಯೆಯು ದುಡಿಯುವ ವಯಸ್ಸಿನ ಗುಂಪಿನಲ್ಲಿದ್ದಾರೆ. ಇದು ಆರ್ಥಿಕ ಪ್ರಗತಿಯೊಂದಿಗೆ ಸಂಯೋಜಿಸಿದಾಗ, ವಿಕಸಿತ ಭಾರತದ ಕಡೆಗೆ ಭಾರತದ ಪ್ರಯಾಣವನ್ನು ಗಮನಾರ್ಹವಾಗಿ ವೇಗಗೊಳಿಸಬಹುದಾದ ವಿಶಿಷ್ಟ ಐತಿಹಾಸಿಕ ಅವಕಾಶವನ್ನು ಸೃಷ್ಟಿಸುತ್ತದೆ ಎಂದರು. ದೇಶವು ಮುಂದಿನ ಪೀಳಿಗೆಯ ಸುಧಾರಣೆಗಳಿಗೆ ಸಾಕ್ಷಿಯಾಗುತ್ತಿರುವ ಮತ್ತು ಪ್ರಮುಖ ಜಾಗತಿಕ ಆರ್ಥಿಕ ಶಕ್ತಿಯಾಗುವತ್ತ ಸ್ಥಿರವಾಗಿ ಸಾಗುತ್ತಿರುವ ಸಮಯದಲ್ಲಿ ಈ ಸಮ್ಮೇಳನ ನಡೆಯುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿದರು. ಆಡಳಿತ, ಸೇವಾ ವಿತರಣೆ ಮತ್ತು ಉತ್ಪಾದನೆಯಲ್ಲಿ ಗುಣಮಟ್ಟವನ್ನು ಒತ್ತಿ ಹೇಳಿದ ಪ್ರಧಾನಿ, 'ಭಾರತದಲ್ಲಿ ತಯಾರಿಸಲಾಗಿದೆ" ಎಂಬ ಲೇಬಲ್ ಶ್ರೇಷ್ಠತೆ ಮತ್ತು ಜಾಗತಿಕ ಸ್ಪರ್ಧಾತ್ಮಕತೆಯ ಸಂಕೇತವಾಗಬೇಕು ಎಂದರು. ವಿಕಸಿತ ಭಾರತದ ದೃಷ್ಟಿಕೋನಕ್ಕೆ ಅನುಗುಣವಾಗಿ ಆಮದು ಅವಲಂಬನೆಯನ್ನು ಕಡಿಮೆ ಮಾಡಲು ಮತ್ತು ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸಲು ದೇಶೀಯ ಉತ್ಪಾದನೆಗಾಗಿ ೧೦೦ ಉತ್ಪನ್ನಗಳನ್ನು ಜಂಟಿಯಾಗಿ ಗುರುತಿಸುವಂತೆ ಅವರು ಕೇಂದ್ರ ಮತ್ತು ರಾಜ್ಯಗಳನ್ನು ಒತ್ತಾಯಿಸಿದರು. ಯುವಕರ ಜೀವನೋಪಾಯಕ್ಕಾಗಿ, ಪ್ರವಾಸೋದ್ಯಮ ದೊಡ್ಡ ಪಾತ್ರವನ್ನು ವಹಿಸುತ್ತದೆ. ಕನಿಷ್ಠ ಒಂದು ಜಾಗತಿಕ ಮಟ್ಟದ ಪ್ರವಾಸಿ ತಾಣವನ್ನು ರಚಿಸಲು ಮತ್ತು ಸಂಪೂರ್ಣ ಪ್ರವಾಸಿ ಪರಿಸರ ವ್ಯವಸ್ಥೆಯನ್ನು ಪೋಷಿಸಲು ಮಾರ್ಗಸೂಚಿಯನ್ನು ಸಿದ್ಧಪಡಿಸುವಂತೆ ಅವರು ರಾಜ್ಯಗಳನ್ನು ಒತ್ತಾಯಿಸಿದರು. ೨೦೩೬ ರ ಒಲಿಂಪಿಕ್ಸ್‌ಗೆ, ಜಾಗತಿಕ ಮಾನದಂಡಗಳಿಗೆ ಅನುಗುಣವಾಗಿ ಮೂಲಸೌಕರ್ಯ ಮತ್ತು ಕ್ರೀಡಾ ಪರಿಸರ ವ್ಯವಸ್ಥೆಯನ್ನು ಸಿದ್ಧಪಡಿಸುವ ಅಗತ್ಯವಿದೆ. ಆ ಸಮಯದಲ್ಲಿ ಸ್ಪರ್ಧಿಸಲು ಈಗಿನಿಂದಲೇ ಮಕ್ಕಳನ್ನು ಗುರುತಿಸಬೇಕು, ಪೋಷಿಸಬೇಕು ಮತ್ತು ತರಬೇತಿ ನೀಡಬೇಕು. ಆಗ ಮಾತ್ರ ಭಾರತ ಅಂತಹ ಕ್ರೀಡಾಕೂಟಗಳಲ್ಲಿ ಅಪೇಕ್ಷಿತ ಫಲಿತಾಂಶಗಳನ್ನು ಪಡೆಯುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><><><>

ಜಾರ್ಖಂಡ್ ಭೇಟಿಯ ಹಿನ್ನೆಲೆಯಲ್ಲಿ ನಿನ್ನೆ ರಾತ್ರಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಂಚಿಗೆ ಆಗಮಿಸಿದರು. ಇಂದು ಅವರು ಜಮ್‌ಶಡ್‌ಪುರದಲ್ಲಿ ನಡೆಯಲಿರುವ ಓಲ್ ಚಿಕಿ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಂತರ ಅವರು, ಜಮ್‌ಶಡ್‌ಪುರದ ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯ-ಎನ್‌ಐಟಿ ೧೫ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ನಾಳೆ ರಾಷ್ಟ್ರಪತಿ ಅವರು, ದುಮ್ಕಾದಲ್ಲಿ ನಡೆಯುವ ಅಂತಾರಾಜ್ಯ ಜನಸಾಂಸ್ಕೃತಿಕ ಸಮಾಗಮದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ತಿರುವನಂತಪುರಂಗೆ ಆಗಮಿಸಲಿದ್ದಾರೆ. ಎರಡು ದಿನಗಳ ಈ ಭೇಟಿಯಲ್ಲಿ, ಅವರು ಪಲಾಯಂ ಎಲ್.ಎಂ.ಎಸ್.ನಲ್ಲಿ ತಿರುವನಂತಪುರ ಉತ್ಸವದ ಭಾಗವಾಗಿ ಆಯೋಜಿಸಲಾದ ಸ್ನೇಹಸಂಗಮ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಾಳೆ ಅವರು ವರ್ಕಳದ ಶಿವಗಿರಿಗೆ ಭೇಟಿ ನೀಡಲಿದ್ದಾರೆ. ನಂತರ ಉಪರಾಷ್ಟ್ರಪತಿ ಅವರು, ನಳಂಚಿರಾದ ಮಾರ್ ಇವಾನಿಯೋಸ್ ಕಾಲೇಜಿನ ಅಮೃತ ಮಹೋತ್ಸವದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

ಕೇಂದ್ರೀಕೃತ ಪ್ರಯತ್ನಗಳು, ನಾವೀನ್ಯತೆ ಮತ್ತು ದೇಶೀಕರಣ, ಭಾರತೀಯ ರೈಲ್ವೆಯನ್ನು ವಿಶ್ವ ದರ್ಜೆಯ ಜಾಲವನ್ನಾಗಿ ಪರಿವರ್ತಿಸಲು ಸಹಾಯ ಮಾಡುತ್ತಿದೆ ಎಂದು ರೈಲ್ವೆ ಸಚಿವಾಲಯ ಹೇಳಿದೆ. ಅಮೃತ ಭಾರತ್ ರೈಲುಗಳ ಮೂಲಕ ಹವಾನಿಯಂತ್ರಿತವಲ್ಲದ ಬೋಗಿಗಳ ಪ್ರಯಾಣಿಕರಿಗೆ ಆರಾಮದಾಯಕ ಪ್ರಯಾಣವನ್ನು ವಿಸ್ತರಿಸಿದ ನಂತರ, ಭಾರತೀಯ ರೈಲ್ವೆ, ಶೀಘ್ರದಲ್ಲೇ ಹವಾನಿಯಂತ್ರಿತ ಬೋಗಿಗಳ ಪ್ರಯಾಣಿಕರಿಗಾಗಿ ಮೊದಲ ವಂದೇ ಭಾರತ್ ಸ್ಲೀಪರ್ ರೈಲನ್ನು ಓಡಿಸಲು ಸಜ್ಜಾಗಿದೆ ಎಂದು ಸಚಿವಾಲಯ ತಿಳಿಸಿದೆ. ಪ್ರಸ್ತುತ ಭಾರತೀಯ ರೈಲ್ವೆ ಜಾಲದಾದ್ಯಂತ ಒಟ್ಟು ೧೬೪ ವಂದೇ ಭಾರತ್ ರೈಲು ಸೇವೆಗಳು ಕಾರ್ಯನಿರ್ವಹಿಸುತ್ತಿವೆ. ಈ ವರ್ಷ, ಪ್ರಧಾನಿ ನರೇಂದ್ರ ಮೋದಿ ಅವರು ೪೨ ಯೋಜನೆಗಳನ್ನು ರಾಷ್ಟ್ರಕ್ಕೆ ಅರ್ಪಿಸಿದರು, ೧೩ ಯೋಜನೆಗಳನ್ನು ಉದ್ಘಾಟಿಸಿದರು ಮತ್ತು ೨೫ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮೌಲ್ಯದ ೨೧ ಯೋಜನೆಗಳಿಗೆ ಅಡಿಪಾಯ ಹಾಕಿದರು. ೨೭೨ ಕಿಲೋಮೀಟರ್ ಉದ್ದದ ಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಸಂಪರ್ಕ ಯೋಜನೆ ಇತ್ತೀಚಿಗೆ ಲೋಕಾರ್ಪಣೆಗೊಂಡಿತು. ಇದು ೩೬ ಪ್ರಮುಖ ಸುರಂಗಗಳು ಮತ್ತು ೯೪೩ ಸೇತುವೆಗಳನ್ನು ಒಳಗೊಂಡಿದೆ. ಇದು ವಿಶ್ವದ ಅತ್ಯಂತ ಸವಾಲಿನ ಭೂಪ್ರದೇಶಗಳಲ್ಲಿ ಒಂದಾದ ಈ ಪ್ರದೇಶದಲ್ಲಿ ಅಸಾಧಾರಣ ಎಂಜಿನಿಯರಿಂಗ್ ಅನ್ನು ಪ್ರತಿಬಿಂಬಿಸುತ್ತದೆ. ಮಿಜೋರಾಂನಲ್ಲಿ ೫೧ ಕಿಲೋಮೀಟರ್ ಉದ್ದದ ಬೈರಾಬಿ-ಸೈರಾಂಗ್ ಬ್ರಾಡ್-ಗೇಜ್ ಮಾರ್ಗ ಇದೇ ಸೆಪ್ಟೆಂಬರ್‌ನಲ್ಲಿ ಉದ್ಘಾಟನೆಗೊಂಡಿತು. ರೈಲ್ವೆ ಜಾಲದಾದ್ಯಂತ ಸಾಮರ್ಥ್ಯ, ದಕ್ಷತೆ ಮತ್ತು ಸುಸ್ಥಿರತೆಯನ್ನು ಹೆಚ್ಚಿಸಲು ಹಲವಾರು ಪರಿವರ್ತನಾತ್ಮಕ ಮೂಲಸೌಕರ್ಯ ಉಪಕ್ರಮಗಳನ್ನು ಭಾರತೀಯ ರೈಲ್ವೆ ಕೈಗೊಳ್ಳುತ್ತಿದೆ ಎಂದು ಸಚಿವಾಲಯ ತಿಳಿಸಿದೆ.

<><><>

ರಷ್ಯಾದೊಂದಿಗಿನ ಯುದ್ಧವನ್ನು ಕೊನೆಗೊಳಿಸುವ ಶಾಂತಿ ಪ್ರಸ್ತಾಪದ ಕುರಿತು ಅಮೆರಿಕದ ಫ್ಲೋರಿಡಾದ ಮಾರ್-ಎ-ಲಾಗೊದಲ್ಲಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾದರು. ಸಭೆಯ ನಂತರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ರಷ್ಯಾ-ಉಕ್ರೇನ್ ಶಾಂತಿ ಮಾತುಕತೆಯಲ್ಲಿ ಸಾಕಷ್ಟು ಪ್ರಗತಿ ಸಾಧಿಸಲಾಗಿದೆ. ಏಕೆಂದರೆ ಎರಡೂ ದೇಶಗಳು ಯುದ್ಧವನ್ನು ಕೊನೆಗೊಳಿಸುವ ಪರವಾಗಿವೆ ಎಂದು ತಿಳಿಸಿದರು. ಶಾಂತಿ ಮಾತುಕತೆಗಳು ಕೆಲವು ವಾರಗಳಲ್ಲಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಮತ್ತು ಇದು ತುಂಬಾ ಕಠಿಣ ಮಾತುಕತೆಯಾಗಿದೆ ಎಂದು ಅವರು ಹೇಳಿದರು. ಭೇಟಿಯ ಸಮಯದಲ್ಲಿ ಇಬ್ಬರೂ ನಾಯಕರು ಹಲವಾರು ಐರೋಪ್ಯ ನಾಯಕರೊಂದಿಗೆ ಫೋನ್ ಮೂಲಕ ಮಾತುಕತೆ ನಡೆಸಿದರು. ಉಕ್ರೇನ್ ಅಧ್ಯಕ್ಷರೊಂದಿಗಿನ ಭೇಟಿಗೆ ಸುಮಾರು ಎರಡೂವರೆ ಗಂಟೆಗಳ ಮೊದಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಫೋನ್ ಕರೆ ಮಾಡಿ, ಮಾತುಕತೆ ನಡೆಸಿದರು.

<><><>

ತಿರುವನಂತಪುರದಲ್ಲಿ ನಿನ್ನೆ ರಾತ್ರಿ ನಡೆದ ಅಂತಾರಾಷ್ಟ್ರೀಯ ಮಹಿಳಾ ಕ್ರಿಕೆಟ್ ಸರಣಿಯ ನಾಲ್ಕನೇ ಟಿ-೨೦ ಪಂದ್ಯದಲ್ಲಿ ಭಾರತ, ಶ್ರೀಲಂಕಾ ತಂಡವನ್ನು ೩೦ ರನ್‌ಗಳಿಂದ ಸೋಲಿಸಿತು. ಈ ಮೂಲಕ ಐದು ಪಂದ್ಯಗಳ ಸರಣಿಯಲ್ಲಿ ೪-೦ ಅಂತರದಿಂದ ಮುನ್ನಡೆ ಸಾಧಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೨ ವಿಕೆಟ್‌ಗಳ ನಷ್ಟಕ್ಕೆ ೨೨೧ ರನ್ ಗಳಿಸಿತು. ಸ್ಮೃತಿ ಮಂಧಾನ ೪೮ ಎಸೆತಗಳಲ್ಲಿ ೮೭ ರನ್ ಗಳಿಸಿದರೆ, ಶಫಾಲಿ ವರ್ಮಾ ೪೬ ಎಸೆತಗಳಲ್ಲಿ ೭೯ ರನ್ ಗಳಿಸದರು. ರಿಚಾ ಘೋಷ್ ಅದ್ಭುತ ಪ್ರದರ್ಶನ ನೀಡಿ, ಕೇವಲ ೧೬ ಎಸೆತಗಳಲ್ಲಿ ೪೦ ರನ್ ಗಳಿಸಿದರು. ಈ ಮೂಲಕ ಭಾರತ ತಂಡ ಬೃಹತ್ ಮೊತ್ತ ಕಲೆಹಾಕಿತು. ೨೨೨ ರನ್‌ಗಳ ಗುರಿಯನ್ನು ಬೆನ್ನಟ್ಟಿದ ಶ್ರೀಲಂಕಾ ತಂಡ, ೨೦ ಓವರ್‌ಗಳಲ್ಲಿ ಆರು ವಿಕೆಟ್‌ಗಳ ನಷ್ಟಕ್ಕೆ ೧೯೧ ರನ್ ಗಳಿಸಿತು. ನಾಯಕಿ ಚಾಮರಿ ಅಥಪತ್ತು ಶ್ರೀಲಂಕಾ ಪರ ಅತಿ ಹೆಚ್ಚು ೫೨ ರನ್ ಗಳಿಸಿದರು. ಸ್ಮೃತಿ ಮಂಧಾನ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಸರಣಿಯ ಐದನೇ ಮತ್ತು ಕೊನೆಯ ಪಂದ್ಯ ನಾಳೆ ತಿರುವನಂತಪುರದಲ್ಲಿ ನಡೆಯಲಿದೆ.

<><><>

ವಿಜಯವಾಡದಲ್ಲಿ ನಿನ್ನೆ ನಡೆದ ೮೭ನೇ ಸೀನಿಯರ್ ರಾಷ್ಟ್ರೀಯ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ತನ್ವಿ ಪಾತ್ರಿ ವಿರುದ್ಧ ಜಯಗಳಿಸುವ ಮೂಲಕ ಸೂರ್ಯ ಚರಿಷ್ಮಾ ತಮಿರಿ ಮಹಿಳಾ ಸಿಂಗಲ್ಸ್ ಪ್ರಶಸ್ತಿಯನ್ನು ಗೆದ್ದರು. ಆರಂಭಿಕ ಪಂದ್ಯದಲ್ಲಿ ಸೋತ ನಂತರ ತಮಿರಿ, ೧೮-೨೧, ೨೧-೧೨, ೨೧-೧೪ ಅಂತರದಲ್ಲಿ ಫೈನಲ್‌ನಲ್ಲಿ ಗೆದ್ದು, ಬಲವಾದ ಪುನರಾಗಮನ ಮಾಡಿದರು. ಪುರುಷರ ಸಿಂಗಲ್ಸ್‌ನಲ್ಲಿ, ರಿತ್ವಿಕ್ ಸಂಜೀವಿ, ಎಸ್.ಭರತ್ ರಾಘವ್ ಅವರನ್ನು ೨೧-೧೬, ೨೨-೨೦ ನೇರ ಸೆಟ್‌ಗಳಿಂದ ಸೋಲಿಸಿ, ಪ್ರಶಸ್ತಿಯನ್ನು ಗೆದ್ದರು. ಪುರುಷರ ಡಬಲ್ಸ್‌ನ ಫೈನಲ್‌ನಲ್ಲಿ ಎ.ಹರಿಹರನ್ ಮತ್ತು ರೂಬನ್ ಕುಮಾರ್ ಜೋಡಿ, ಮಿಥಿಲೇಶ್ ಕೃಷ್ಣನ್ ಮತ್ತು ಪ್ರೇಜನ್ ಅವರನ್ನು ೨೪-೨೨, ೨೧-೧೮ ಅಂತರದಲ್ಲಿ ಸೋಲಿಸಿ, ಚಾಂಪಿಯನ್ ಆಗಿ ಹೊರಹೊಮ್ಮಿತು. ಮಹಿಳಾ ಡಬಲ್ಸ್ ಫೈನಲ್‌ನಲ್ಲಿ, ಶಿಖಾ ಗೌತಮ್ ಮತ್ತು ಅಶ್ವಿನಿ ಭಟ್ ಜೋಡಿ, ಪ್ರಿಯಾ ದೇವಿ ಕೊಂಜೆಂಗ್‌ಬನ್ ಮತ್ತು ಶ್ರುತಿ ಮಿಶ್ರಾ ಜೋಡಿಯನ್ನು ೨೧-೧೪, ೨೧-೧೮ ಅಂತರದಲ್ಲಿ ಸೋಲಿಸಿ ಪ್ರಶಸ್ತಿಯನ್ನು ತಮ್ಮಲ್ಲೇ ಉಳಿಸಿಕೊಂಡರು. ಈ ನಡುವೆ ಮಿಶ್ರ ಡಬಲ್ಸ್ ಫೈನಲ್‌ನಲ್ಲಿ ಸಾತ್ವಿಕ್ ರೆಡ್ಡಿ ಮತ್ತು

ರಾಧಿಕಾ ಶರ್ಮಾ ಜೋಡಿ, ಆಶಿತ್ ಸೂರ್ಯ ಮತ್ತು ಅಮೃತಾ ಪಿ ಜೋಡಿಯನ್ನು ೨೧-೯, ೨೧-೧೫ ಅಂತರದಲ್ಲಿ ಸೋಲಿಸಿ, ಚಾಂಪಿಯನ್‌ಶಿಪ್ ಆಗಿ ಹೊರಹೊಮ್ಮಿತು.

<><><><>

ಬಾಂಗ್ಲಾದೇಶದಲ್ಲಿ ಈ ವರ್ಷದ ಜೂನ್ ಮತ್ತು ಡಿಸೆಂಬರ್ ನಡುವೆ ಹಿಂದೂ ಅಲ್ಪಸಂಖ್ಯಾತರ ವಿರುದ್ಧ ಧರ್ಮನಿಂದನೆಯ ಆರೋಪಗಳಿಗೆ ಸಂಬಂಧಿಸಿದ ಕನಿಷ್ಠ ೭೧ ಘಟನೆಗಳು ವರದಿಯಾಗಿವೆ ಎಂದು ಬಾಂಗ್ಲಾದೇಶ ಅಲ್ಪಸಂಖ್ಯಾತರ ಮಾನವ ಹಕ್ಕುಗಳ ಒಕ್ಕೂಟ ತಿಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>